# ಕರ್ನಾಟಕ ಸರಕಾರದ ನಡುವಳಿಕೆಗಳು

ವಿಷಯ:- ಬಾಗಲಕೋಟ ಜಿಲ್ಲೆಯ ಬೀಳಗಿ ತಾಲೂಕಿನ ತೆಗ್ಗಿ-ಸಿದ್ದಾಪೂರ ಏತ ನೀರಾವರಿ ಯೋಜನೆಯ ವಿತರಣಾ ಕಾಲುವೆ ಸಂಖ್ಯೆ: 2ರಡಿ ಬಾಧಿತಗೊಳ್ಳುವ ಬೀಳಗಿ ತಾಲೂಕಿನ: ತೆಗ್ಗಿ ಗ್ರಾಮದ ಜಮೀನು ಭೂಸ್ವಾಧೀನತೆಯ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಅಧಿನಿಯಮ-2013ರನ್ವಯ ಕರಡು ಯಾದಿಯನ್ನು ಅನುಮೋದಿಸುವ ಕುರಿತು.

ಓದಲಾಗಿದೆ: 1} ಭೂಸ್ವಾಧೀನ ಕಾಯ್ದೆ 2013ರ ಕಲಂ 11(1)ಕ್ಕೆ ಅನುಸಾರವಾಗಿ ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ:ವಿಜಿಬಾ/ಭೂಸ್ವಾ/ಸಿಆರ್-04/ 2014-15 ದಿನಾಂಕ: 06-09-2014.

2} ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಕುರಿತು.

3} ಸರ್ಕಾರದ ಆದೇಶ ಸಂಖ್ಯೆ: ಕಂಇ:18:ಆರ್‌ಇಹೆಚ್:2014:ಬೆಂಗಳೂರು ದಿನಾಂಕ: 06-02-2014.

4} ಈ ಕಾರ್ಯಾಲಯದ ಪತ್ರ ಸಂಖ್ಯೆ:ಕಂಇ:ಭೂಸ್ವಾ-5(2):ವಿನಿವ-617/16-17 4677A ದಿನಾಂಕ: 04-01-2017.

5} ಪುನರ್‌ವಸತಿ ಅಧಿಕಾರಿ, ಕೃ.ಮೇ.ಯೋ. ಬೀಳಗಿ. ಇವರ ಪತ್ರ ಸಂಖ್ಯೆ: 855 ದಿನಾಂಕ: 14-12-2016

6} ಮಹಾ ವ್ಯವಸ್ಥಾಪಕರು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಕೃ.ಮೇ.ಯೋ. ನವನಗರ, ಬಾಗಲಕೋಟ ಇವರ ಕಲಂ 17(2)ರಡಿ ಶಿಫಾರಸ್ಸು ದಿನಾಂಕ: 19-01-2017.

*******

ಆದೇಶ ಸಂ:ಮವ್ಯ/ಪುಪು/ಆರ್‌ಆರ್‌ಎಪಿ/ಬೀಳಗಿ/ಸಿಆರ್- 124/2016-17/520 ದಿನಾಂಕ: 23-01-2017.

ಪುನರ್‌ವಸತಿ ಅಧಿಕಾರಿ, ಕೃ.ಮೇ.ಯೋ. ಬೀಳಗಿ ಇವರಿಂದ ಬಂದಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಾರ್ವಜನಿಕ ಉದ್ದೇಶಕ್ಕಾಗಿ ಬಾಗಲಕೋಟ ಜಿಲ್ಲೆಯ ಬೀಳಗಿ ತಾಲೂಕಿನ ತೆಗ್ಗಿ-ಸಿದ್ದಾಪೂರ ಏತ ನೀರಾವರಿ ಯೋಜನೆಯ ವಿತರಣಾ ಕಾಲುವೆ ಸಂಖ್ಯೆ: 3ರಡಿ ಬಾಧಿತಗೊಳ್ಳುವ ಬೀಳಗಿ ತಾಲೂಕಿನ ತೆಗ್ಗಿ ಗ್ರಾಮದ ಜಮೀನುಗಳು ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಜಮೀನಿನ ಭೂಮಾಲೀಕರಿಗೆ ಜೆ.ಎಂ.ಸಿ. ಪ್ರಕಾರ ಒಟ್ಟು: 01ಎ-31ಗುಂ ಕ್ಷೇತ್ರಕ್ಕೆ ನೂತನ ಕಾಯ್ದೆ ಕಲಂ 16(2) ನೇದ್ದರ ಮೇರೆಗೆ ಗಣತಿ ಕಾರ್ಯವನ್ನು ಕೈಗೊಂಡು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಯಾದಿಯನ್ನು ತಯಾರಿಸಿದ್ದಾರೆ.

ವಿಶೇಷ ಭೂಸ್ವಾಧೀನಾಧಿಕಾರಿ, ಕೃ.ಮೇ.ಯೋ. ಬೀಳಗಿ ಇವರನ್ನು ಈ ಯೋಜನೆಗೆ ಕಾರ್‍ಯವನ್ನು ನಿರ್ವಹಿಸಲು ನೇಮಿಸಲಾಗಿದೆ ಮತ್ತು ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಆದೇಶಿಸುವ ಅಧಿಕಾರವನ್ನು ನೀಡಲಾಗಿದೆ.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಅನುಗುಣವಾಗಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಹಾಗೂ ಭೂಸ್ವಾಧೀನ ಕಾಯ್ದೆ 2013ರ ಕಲಂ 45 ರಡಿ ಪ್ರಕರಣದಲ್ಲಿ ಸದರಿ ಭೂಸ್ವಾಧೀನ ಪ್ರಕರಣದಲ್ಲಿ ಒಳಗೊಂಡ ಕ್ಷೇತ್ರವು 100 ಎಕರೆಗಿಂತ ಕಡಿಮೆ ಇರುವುದರಿಂದ ಅನ್ವಯಿಸುವುದಿಲ್ಲ.

...2)

ನೂತನ ಭೂಸ್ವಾಧೀನ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಕಾಯ್ದೆ 2013ರ ಕಲಂ 16(3)ರಡಿ ತಯಾರಿಸಲಾದ ಗಣತಿ ಯಾದಿಯಲ್ಲಿ ಜೆ.ಎಂ.ಸಿ. ಪ್ರಕಾರ ಒಟ್ಟು ಕ್ಷೇತ್ರ: 01ಎ–31ಗುಂ. ಕ್ಷೇತ್ರದಲ್ಲಿ ಜಮೀನು ಸ್ವಾಧೀನಕ್ಕೆ ಒಳಪಡುತ್ತಿದ್ದು, ಈ ಪೈಕಿ ಒಟ್ಟು: 07 ಕುಟುಂಬಗಳು ಬಾಧಿತಗೊಳ್ಳುತ್ತಿದ್ದು, ಪ್ರಸ್ತುತ ನೂತನ ಭೂಸ್ವಾಧೀನ ಕಾಯ್ದೆ ಅನುಸಾರ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾದ ಕ್ಷೇತ್ರವನ್ನು ಪರಿಗಣಿಸಿ ಯಾವುದೇ ಕುಟುಂಬವು ಅವರು ಹೊಂದಿದ ಕ್ಷೇತ್ರಕ್ಕಿಂತ ಬಹುಪಾಲು ಭೂಮಿಯನ್ನು ಕಳೆದುಕೊಳ್ಳುವುದಿಲ್ಲ. ಹಾಗೂ ಜೀವನೋಪಾಯ ನಷ್ಟತೆಯನ್ನು ಹೊಂದುವುದಿಲ್ಲ ಎಂಬುದರ ಬಗ್ಗೆ ಪುನರ್‌ವಸತಿ ಅಧಿಕಾರಿ, ಕೃ.ಮೇ.ಯೋ. ಬೀಳಗಿರವರು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಯೋಜನೆಯ ಕರಡು ಯಾದಿಯನ್ನು ತಯಾರಿಸಿ ದೃಢಪಡಿಸಿಕೊಂಡಿದ್ದಾರೆ.

ಪುನರ್‌ವಸತಿ ಅಧಿಕಾರಿ, ಕೃ.ಮೇ.ಯೋ. ಬೀಳಗಿ ಇವರು ಶಿಫಾರಸ್ಸು ಮಾಡಿರುವ ಯಾದಿಯನ್ನು ಆಧರಿಸಿ, ನೂತನ ಭೂಸ್ವಾಧೀನ ಕಾಯ್ದೆ 2013ರ ಕಲಂ 84 ರನ್ವಯ ಸೌಲಭ್ಯ ಪಡೆಯುವ ಕುಟುಂಬವು ಸುಳ್ಳು ಮಾಹಿತಿ ನೀಡಿದಲ್ಲಿ ಕಲಂ 84 (1) (2) ಹಾಗೂ (3) ರನ್ವಯ ಶಿಕ್ಷೆಗೆ ಗುರಿಪಡಿಸಲಾಗುವುದೆಂಬ ಷರತ್ತಿಗೆ ಒಳಪಟ್ಟು ಪುನರ್‌ವ್ಯವಸ್ಥೆ ಯೋಜನೆಯ ಪ್ರಸ್ತಾವನೆಯನ್ನು ನೂತನ ಕಾಯ್ದೆ ಕಲಂ 18ರಡಿ ಅನುಮೋದಿಸಲಾಗಿದೆ.

ಕಾಯ್ದೆ ಕಲಂ 41(6)ರಡಿ ಅನುಸೂಚಿತ ಪಂಗಡ ಹಾಗೂ ಬುಡಕಟ್ಟು ಜನಾಂಗಗಳಿಗೆ ಭೂಸ್ವಾಧೀನ ಪ್ರಕರಣಗಳು ಒಳಪಟ್ಟಿದ್ದಲ್ಲಿ ಸ್ವಾಧೀನದ ಸ್ವತ್ತುಗಳ ಶೇಕಡಾ 1/3 ರಷ್ಟು ಪರಿಹಾರಧನವನ್ನು ಸ್ವಾಧೀನ ಪೂರ್ವದಲ್ಲಿ ಬಾಧಿತ ಕುಟುಂಬಗಳಿಗೆ ಪಾವತಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

23/01
ಆಯುಕ್ತರು,
ಪುಪು ಮತ್ತು ಭೂಸ್ವಾಧೀನ, ಕೃಮೇಯೋ,
ಹಾಗೂ ಪದನಿಮಿತ್ತ ಸರಕಾರದ ಕಾರ್ಯದರ್ಶಿಗಳು,
ಕರ್ನಾಟಕ ಸರಕಾರ, ಕಂದಾಯ ಇಲಾಖೆ,
ನವನಗರ, ಬಾಗಲಕೋಟ.

ಇವರಿಗೆ:

1) ಜಿಲ್ಲಾಧಿಕಾರಿಗಳು, ಬಾಗಲಕೋಟ ಜಿಲ್ಲೆ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
2) ಮಹಾ ವ್ಯವಸ್ಥಾಪಕರು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಕೃ.ಮೇ.ಯೋ. ನವನಗರ, ಬಾಗಲಕೋಟ ಇವರಿಗೆ
3) ವಿಶೇಷ ಜಿಲ್ಲಾಧಿಕಾರಿ, ಕೃ.ಮೇ.ಯೋ. ನವನಗರ, ಬಾಗಲಕೋಟ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
4) ಉಪ ವಿಭಾಗಾಧಿಕಾರಿ, ಜಮಖಂಡಿ ಉಪ–ವಿಭಾಗ, ಜಮಖಂಡಿ ಇವರಿಗೆ ಮಾಹಿತಿಗಾಗಿ.
5) ಪುನರ್‌ವಸತಿ ಅಧಿಕಾರಿ, ಕೃ.ಮೇ.ಯೋ. ಬೀಳಗಿ ಇವರಿಗೆ ಸಂಬಂಧಪಟ್ಟ ಕಡತದೊಂದಿಗೆ ಹಿಂದಿರುಗಿಸಲಾಗಿದೆ.
6) ವಿಶೇಷ ಭೂಸ್ವಾಧೀನಾಧಿಕಾರಿ, ಕೃ.ಮೇ.ಯೋ. ಬೀಳಗಿ ಇವರಿಗೆ ಸೂಕ್ತ ಕ್ರಮಕ್ಕಾಗಿ
7) ತಹಶೀಲ್ದಾರರು ಬೀಳಗಿ ತಾಲೂಕ ಇವರ ಮಾಹಿತಿಗಾಗಿ.
8) ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತ, ತೆಗ್ಗಿ ತಾಲೂಕ: ಬೀಳಗಿ ಇವರಿಗೆ.
9) Web site: www.bagalkot.nic.in/ukp. ಅಂತರಜಾಲದಲ್ಲಿ ಅಳವಡಿಸಲು ಸಿಸ್ಟಂ ಮ್ಯಾನೇಜರ, ಕಂಪ್ಯೂಟರ ವಿಭಾಗ ಪು ಮತ್ತು ಪು. ಕೃ.ಮೇ.ಯೋ. ನವನಗರ, ಬಾಗಲಕೋಟ ಇವರಿಗೆ.
10) ಭೂಸ್ವಾಧೀನ ಶಾಖೆಗೆ.